# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(6)ಪಿಆರ್/ 75 /22-23

ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 12/7/22

**<u>ಕಛೇರಿ ಆದೇಶ</u>**

ವಿಷಯ: ಶ್ರೀ ಅಶೋಕ ಬಾಗಿ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಇವರನ್ನು ಪಾಲಿಕೆಯ ಸೇವೆಯಿಂದ ಬಿಡುಗಡೆ ಮಾಡುವ ಬಗ್ಗೆ.

ಉಲ್ಲೇಖ: ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಅಧಿಸೂಚನೆ ಸಂಖ್ಯೆ ನಅಇ : 140 ಬೆಂ.ಆ.ಸೇ 2022 (ಇ) ದಿನಾಂಕ: 11-07-2022

----------

ಶ್ರೀ ಅಶೋಕ ಬಾಗಿ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಜಲಸಂಪನ್ಮೂಲ ಇಲಾಖೆಯಿಂದ ಎರವಲು ಸೇವೆಯ ಮೇಲೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ನಿಯೋಜನೆಗೊಂಡು, ಮುಖ್ಯ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ) ರವರ ಅಧೀನದಲ್ಲಿ ಕೆ-100 Citizen Way Project ಹಾಗೂ ಹೆಚ್ಚುವರಿ ಪ್ರಭಾರದ ಮೇಲೆ ರಸ್ತೆ ಮತ್ತು ಮೂಲಭೂತ ಸೌಕರ್ಯ-ಕೆ.ಆರ್.ಪುರ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಇವರನ್ನು ಉಲ್ಲೇಖಿತದ ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಅಧಿಸೂಚನೆಯನ್ವಯ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ನೇಮಿಸಿರುವುದರಿಂದ, ಸದರಿಯವರನ್ನು ಈ ತಕ್ಷಣದಿಂದ ಜಾರಿಗೆ ಬರುವಂತೆ ಈ ಕೆಳಕಂಡ ಷರತ್ತಿಗೊಳಪಡಿಸಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸಿ ಆದೇಶಿಸಿದೆ.

**ಷರತ್ತುಗಳು:-**

1. ಸದರಿ ಅಭಿಯಂತರರು ನಗರ ಪಾಲಿಕೆಯ ಸೇವಾ ಅವಧಿಯಲ್ಲಿ ನಗರ ಪಾಲಿಕೆಗೆ ಯಾವುದೇ ಆರ್ಥಿಕ ಬಾಕಿಯನ್ನು ಉಳಿಸಿಕೊಂಡಿದ್ದಲ್ಲಿ ಸದರಿಯವರಿಂದ ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ.
2. ಸದರಿ ಅಭಿಯಂತರರ ವಿರುದ್ಧ ಇಲಾಖಾ ವಿಚಾರಣೆ ಬಾಕಿ ಇದ್ದಲ್ಲಿ ನಿಯಮಾನುಸಾರ ಕ್ರಮಜರುಗಿಸುವ ಷರತ್ತಿಗೊಳಪಡಿಸಿದೆ.
3. ಪಾಲಿಕೆಯ ಹಿಂದಿನ ವರ್ಷಗಳ ಆಡಿಟ್ ವರದಿಗಳಲ್ಲಿ ಯಾವುದೇ ಆರ್ಥಿಕ ಬಾಕಿಯನ್ನು ಸದರಿಯವರಿಂದ ವಸೂಲಾತಿ ಮಾಡಲು ಸೂಚಿಸಿದಲ್ಲಿ, ಅಂತಹ ಮೊತ್ತವನ್ನು ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಅವುಗಳಿಗೆ ಸಮರ್ಪಕ ಉತ್ತರ ನೀಡುವ ಷರತ್ತು ವಿಧಿಸಿದೆ.
4. ಸದರಿಅಭಿಯಂತರರು ನಗರ ಪಾಲಿಕೆಯ ವಸತಿಗೃಹದಲ್ಲಿ ವಾಸಿಸುತ್ತಿದ್ದಲ್ಲಿ ಕೂಡಲೇ ತೆರವುಗೊಳಿಸುವ ಷರತ್ತಿಗೊಳಪಡಿಸಿದೆ.
5. ವಾಕಿ ಟಾಕಿ, ಮೊಬೈಲ್ ಫೋನ್, ಸಿಮ್‌ಕಾರ್ಡ್, ಹೆಲ್ಮ್ಯಾರ್ಡ್, ಗುರುತಿನ ಚೀಟಿ (Identity card) ಹಾಗೂ ಲ್ಯಾಪ್ ಟಾಪ್‌ಗಳನ್ನು ಪಾಲಿಕೆಯಿಂದ ಪಡೆದಿದ್ದಲ್ಲಿ ಇವುಗಳನ್ನು ಪಾಲಿಕೆಗೆ ಹಿಂದಿರುಗಿಸುವ ಷರತ್ತಿಗೊಳಪಡಿಸಿದೆ.

ಮಾನ್ಯ ಮುಖ್ಯ ಆಯುಕ್ತರು ರವರ
ಆದೇಶದಂತೆ

12/7/22
ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

CO
14/07/2022
12/7/2022

**ಪ್ರತಿಯನ್ನು :**

: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
: ವಿಶೇಷ ಆಯುಕ್ತರು (ಯೋಜನೆ) / ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ರವರಿಗೆ ಕಳುಹಿಸಿದೆ
: ಸರ್ಕಾರದ ಅಧೀನ ಕಾರ್ಯದರ್ಶಿಗಳು, ಜಲಸಂ ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಬೆಂಗಳೂರು ರವರಿಗೆ ಕಳುಹಿಸಿದೆ
: ಮುಖ್ಯ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ) ವಲಯ ರವರಿಗೆ ಕಳುಹಿಸಿದೆ.
: ಮಾಹಿತಿ ತಂತ್ರಜ್ಞಾನ ಸಲಹೆಗಾರರುರವರಿಗೆ ಕಳುಹಿಸುತ್ತಾ, ಸದರಿಯವರು ಮೊಬೈಲ್ ಫೋನ್ ಮತ್ತು ಸಿಮ್‌ಕಾರ್ಡ್‌ನ್ನು ಪಾಲಿಕೆಗೆ ಹಿಂದಿರುಗಿಸಿರುವ ಬಗ್ಗೆ ದೃಢೀಕರಿಸಿಕೊಳ್ಳುವುದು.
: ಕಾ.ಪಾ.ಅ (ರಸ್ತೆ ಮೂಲಭೂತ ಸೌಕರ್ಯ-ಕೆ.ಆರ್.ಪುರ) ವಿಭಾಗ ರವರಿಗೆ ಕಳುಹಿಸಿದೆ.
: ಕಾ.ಪಾ.ಅ (ರಸ್ತೆ ಮೂಲಭೂತ ಸೌಕರ್ಯ- ಕೆ-100 Citizen Way Project) ರವರಿಗೆ ಕಳುಹಿಸಿದೆ.
: ಮು.ಲೆ.ಅ / ಮು.ಲೆ.ಪ ರವರಿಗೆ ರವರಿಗೆ /ಉ.ನಿ (ಹಣಕಾಸು-ಕೇಂದ್ರ) ರವರಿಗೆ ಕಳುಹಿಸಿದೆ.
: ಸಂಬಂಧಪಟ್ಟ ಅಭಿಯಂತರರಿಗೆ / ಕಛೇರಿ ಪ್ರತಿ.